P-72- 1+11

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಬಸವರಾಜ ಪಾಟೀಲ್ ಇಟಗಿ ಮತ್ತು ಶ್ರೀ. ಪ್ರಕಾಶ್ ಕೆ. ರಾಥೋಡ್ ಇವರುಗಳು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:- ಆಲಮಟ್ಟಿ ಅಣೆಕಟ್ಟನ್ನು 519.60 ರಿಂದ 524.00 ಅಡಿಗೆ ಹೆಚ್ಚಿಸಿರುವುದರಿಂದ ವಿಜಯಪುರ ಜಿಲ್ಲೆ ಜನರಿಗೆ ಹಾಗೂ ಜಾನುವಾರುಗಳಿಗೆ ಮತ್ತು ಕೃಷಿ ಉತ್ಪನ್ನಕ್ಕೆ ಅನುಕೂಲವಾಗಿರುವುದರಿಂದ ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು 524.00 ಅಡಿಗೆ ಹೆಚ್ಚಿಸಬೇಕೆಂದು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯಬಯಸುತ್ತೇನೆ.**

****

ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ದಿನಾಂಕ:30/12/2010 ಹಾಗೂ ಮುಂದುವರೆದ ತೀರ್ಪು ದಿನಾಂಕ:29/11/2013 ರಂದು ನೀಡಲಾಗಿರುತ್ತದೆ. ಸದರಿ ನ್ಯಾಯಾಧೀಕರಣದ ತೀರ್ಪು ಇನ್ನೂ ಕೇಂದ್ರ ಸರ್ಕಾರದಿಂದ ಅಧಿಸೂಚನೆ ಹೊರಡಿಸಿರುವುದಿಲ್ಲ.

ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟ ಆರ್.ಎಲ್. 524.256 ಮೀ.ರವರೆಗೆ ಎತ್ತರಿಸುವುದು ಕೇಂದ್ರ ಸರ್ಕಾರದಿಂದ ಹೊರಡಿಸುವ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ಅಧಿಸೂಚನೆಗೆ ಒಳಪಟ್ಟಿರುತ್ತದೆ. ನ್ಯಾಯಾಧೀಕರಣ-2ರ ತೀರ್ಪಿನ ಕುರಿತಾಗಿ ಕರ್ನಾಟಕ, ತೆಲಂಗಾಣ ಮತ್ತು ಆಂಧ್ರ ಪ್ರದೇಶ ರಾಜ್ಯಗಳು ಸರ್ವೋಚ್ಛ ನ್ಯಾಯಾಲಯದಲ್ಲಿ ಸಲ್ಲಿಸಿರುವ ವಿಶೇಷ ಅನುಮತಿ ಅರ್ಜಿಗಳು ಇತ್ಯರ್ಥವಾಗಬೇಕಾಗಿರುತ್ತದೆ. ದಿನಾಂಕ:16.09.2011ರ ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಲ್ಲಿ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ಆದೇಶಿಸಲಾಗಿದೆ. ಸದರಿ ಸರ್ವೋಚ್ಛ ನ್ಯಾಯಾಲಯದ ತೀರ್ಪನ್ನು ಮಾರ್ಪಡಿಸುವಂತೆ ಮತ್ತು ಕೃಷ್ಣಾ ನ್ಯಾಯಾಧೀಕರಣ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡಲು ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಈಗಾಗಲೇ ರಾಜ್ಯ ಸರ್ಕಾರದಿಂದ ದಿನಾಂಕ:18.02.2019 ರಂದು ಮಾನ್ಯ ಸರ್ವೋಚ್ಛ ನ್ಯಾಯಾಲಯಕ್ಕೆ ಮಧ್ಯಕಾಲಿನ ಅರ್ಜಿಯನ್ನು ಸಲ್ಲಿಸಲಾಗಿರುತ್ತದೆ. ಇದಲ್ಲದೆ, ಕಣಿವೆ ರಾಜ್ಯಗಳು ಸಲ್ಲಿಸಿರುವ ಎಸ್.ಎಲ್.ಪಿ.ಗಳ ಇತ್ಯರ್ಥವನ್ನು ಕಾಯ್ದಿರಿಸಿ ಕಾವೇರಿ ಮತ್ತು ಮಹಾದಾಯಿ ನ್ಯಾಯಾಧೀಕರಣಗಳ ಅಂತಿಮ ತೀರ್ಪನ್ನು ಕೇಂದ್ರ ಸರ್ಕಾರವು ಗೆಜೆಟ್ ಪ್ರಕಟಣೆ ಮಾಡಿರುವಂತೆ ಕೃಷ್ಣಾ ನ್ಯಾಯಾಧೀಕರಣದ ತೀರ್ಪನ್ನು ಸಹ ಗೆಜೆಟ್ ಪ್ರಕಟಣೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಕೋರಲಾಗಿರುತ್ತದೆ.

ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ಅನ್ವಯ ರಾಜ್ಯಕ್ಕೆ ಒಟ್ಟಾರೆ 173 ಟಿ.ಎಂ.ಸಿ. ನೀರಿನ ಹಂಚಿಕೆ ಆಗಿದ್ದು, ಇದರಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಅನುಷ್ಠಾನಕ್ಕಾಗಿ 130 ಟಿ.ಎಂ.ಸಿ. ನೀರಿನ ಹಂಚಿಕೆ ಆಗಿರುತ್ತದೆ. ಸದರಿ ಹಂಚಿಕೆಯಾದ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟವನ್ನು ಆರ್.ಎಲ್.519.60ಮೀ. ನಿಂದ ಆರ್.ಎಲ್.524.256ಮೀ. ವರೆಗೆ (4.656 ಮೀ) ಎತ್ತರಿಸುವುದು ಒಳಗೊಂಡಿರುತ್ತದೆ.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ರಡಿ 9 ಉಪ ಯೋಜನೆಗಳ ಅನುಷ್ಠಾನದೊಂದಿಗೆ ಉತ್ತರ ಕರ್ನಾಟಕದ ವಿಜಯಪುರ, ಬಾಗಲಕೋಟೆ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಗದಗ ಜಿಲ್ಲೆಗಳಡಿ ಈ ಕೆಳಕಂಡಂತೆ ಒಟ್ಟಾರೆ 5.94 ಲಕ್ಷ ಹೆಕ್ಟೇರ್ (14.67 ಲಕ್ಷ ಎಕರೆ) ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವುದಾಗಿರುತ್ತದೆ.

| ಕ್ರ ಸಂ. | ಕೃಮೇಯೋ ಹಂತ-3 ರಲ್ಲಿಯ ಉಪಯೋಜನೆಗಳು | ನೀರಾವರಿ ಕ್ಷೇತ್ರ (ಹೆಕ್ಟೇರ್) |
|---|---|---|
| 1 | ಮುಳವಾಡ ಏತ ನೀರಾವರಿ ಯೋಜನೆ | 2,27,966 |
| 2 | ಚಿಮ್ಮಲಗಿ ಏತ ನೀರಾವರಿ ಯೋಜನೆ | 87,067 |
| 3 | ಇಂಡಿ ಏತ ನೀರಾವರಿ ಯೋಜನೆ (ಗುತ್ತಿಬಸವಣ್ಣ) | 20,690 |
| 4 | ನಾರಾಯಣಪೂರ ಬಲದಂಡೆ ಕಾಲುವೆ ವಿಸ್ತರಣೆ | 61,747 |
| 5 | ರಾಂಪೂರ ಏತ ನೀರಾವರಿ ಯೋಜನೆ | 13,923 |
| 6 | ಮಲ್ಲಾಬಾದ್ ಏತ ನೀರಾವರಿ ಯೋಜನೆ | 33,730 |
| 7 | ಕೊಪ್ಪಳ ಏತ ನೀರಾವರಿ ಯೋಜನೆ (*) | (*) 48,436 |
| 8 | ಹೆರಕಲ್ ಏತ ನೀರಾವರಿ ಯೋಜನೆ | 15,344 |
| 9 | ಭೀಮಾ ಫ್ಲ್ಯಾಂಕ್ | 21,572 |
| | ಒಟ್ಟು | 5,30,475 |

**(*) ಕೊಪ್ಪಳ ಏತ ನೀರಾವರಿ ಯೋಜನೆಯಡಿ ಸರ್ಕಾರದ ಅನುಮೋದನೆಯನ್ವಯ 1.12 ಲಕ್ಷ ಹೆಕ್ಟೇರ್ (2.77 ಲಕ್ಷ ಎಕರೆ) ಕ್ಷೇತ್ರಕ್ಕೆ ಹನಿ ನೀರಾವರಿ ಸೌಲಭ್ಯ (ಸಾಂಪ್ರದಾಯಿಕ ಕಾಲುವೆ ಜಾಲದ ಬದಲಾಗಿ) ಒದಗಿಸುವುದಾಗಿರುತ್ತದೆ.**

ಈ 9 ಉಪ ಯೋಜನೆಗಳಡಿಯ ಏತ ನೀರಾವರಿ ಯೋಜನೆಗಳ ಮುಖ್ಯ ಸ್ಥಾವರಗಳ ನಿರ್ಮಾಣ, ಮುಖ್ಯ /ಶಾಖಾ ಕಾಲುವೆ ಮತ್ತು ವಿತರಣಾ ಕಾಲುವೆ ಜಾಲಗಳ ನಿರ್ಮಾಣ ಕಾಮಗಾರಿಗಳನ್ನು ಮುಂದುವರೆಸುತ್ತಾ ಆದ್ಯತೆಯ ಮೇರೆಗೆ ಕಾರ್ಯಗತಗೊಳಿಸಲಾಗುತ್ತಿದೆ.

ಇದಲ್ಲದೆ, ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಭೂಸ್ವಾಧೀನಕ್ಕೆ ಒಳಪಡುವ ಒಟ್ಟಾರೆ 1.34 ಲಕ್ಷ ಎಕರೆ ಜಮೀನು ಭೂಸ್ವಾಧೀನಕ್ಕೆ ಹಾಗೂ ಮುಳುಗಡೆ ಹೊಂದುವ 20 ಗ್ರಾಮಗಳ ಮತ್ತು ಬಾಗಲಕೋಟೆ ಪಟ್ಟಣದ ಪುನರ್ ನಿರ್ಮಾಣವನ್ನು "ನ್ಯಾಯಬದ್ಧ ಮತ್ತು ಪಾರದರ್ಶಕ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ 2013" ರನ್ವಯ ಕ್ರಮಕೈಗೊಳ್ಳಲಾಗುತ್ತಿದೆ. ಯೋಜನೆ ಅಡಿಯ ಭೂಸ್ವಾಧೀನತೆಗಾಗಿ ಏಕರೂಪ ಭೂಪರಿಹಾರ ನಿಗದಿಪಡಿಸುವ ಕುರಿತಾಗಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ದಿನಾಂಕ:27.08.2019ರಲ್ಲಿ ರಚಿಸಲಾಗಿರುತ್ತದೆ. ಯೋಜನೆಯಡಿ ಇದುವರೆಗೂ 19,399 ಎಕರೆ ಜಮೀನು ಭೂಸ್ವಾಧೀನತೆಗೆ ಅವಾರ್ಡ್ ಮಾಡಲಾಗಿದೆ.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಯ ರೂ.51,148.94 ಕೋಟಿ ಪರಿಷ್ಕೃತ ಅಂದಾಜು ಮೊತ್ತಕ್ಕೆ ಸರ್ಕಾರವು ಆದೇಶ ದಿನಾಂಕ:09.10.2017 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ. ಯೋಜನೆಯ ಅನುಷ್ಠಾನಕ್ಕಾಗಿ ಪ್ರಾರಂಭದಿಂದ ಆಗಸ್ಟ್ 2020ರ ವರೆಗೆ ಒಟ್ಟು ರೂ.11,830.27 ಕೋಟಿ ಖರ್ಚು ಮಾಡಲಾಗಿರುತ್ತದೆ ಹಾಗೂ ಯೋಜನೆಯಡಿ ಇದುವರೆಗೂ ಒಟ್ಟು 76,173 ಹೆಕ್ಟೇರ್ ಅಚ್ಚುಕಟ್ಟು ಕ್ಷೇತ್ರದ ಔಟ್ ಲೆಟ್ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿರುತ್ತದೆ.

ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಅಧಿಸೂಚನೆ ಹೊರಡಿಸಲು ಕೇಂದ್ರ ಸರ್ಕಾರದ ಜೊತೆಗೆ ಸಮನ್ವಯ ಸಾಧಿಸುತ್ತಿದ್ದು, ಅಧಿಸೂಚನೆ ಹೊರಡಿಸಲು ಎಲ್ಲಾ ಸೂಕ್ತ ಕ್ರಮಕೈಗೊಳ್ಳಲಾಗುತ್ತಿದೆ.

(ರಮೇಶ್ ಲ. ಜಾರಕಿಹೊಳಿ)
ಜಲ ಸಂಪನ್ಮೂಲ ಸಚಿವರು